**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹೊನ್ನಾವರ**

**ಫೌಜುದಾರಿ ಪ್ರಕರಣ ಸಂಖ್ಯೆ : 76/2020**

**ಚಾ.ಸಾಃ 25, ಫ್ರಾ.ಸಾಃ 11**

| | |
|---|---|
| ಸಾಕ್ಷಿದಾರನ ಹೆಸರು | ಶಶಿಕುಮಾರ ಸಿ.ಆರ್. |
| ತಂದೆಯ ಹೆಸರು | ರಾಮಯ್ಯ |
| ವಯಸ್ಸು | 42 ವರ್ಷಗಳು |
| ಉದ್ಯೋಗ | ಪೋಲೀಸ್ ನಿರೀಕ್ಷಕರು, ಲೋಕಾಯುಕ್ತ, ಚಾಮರಾಜನಗರ |
| ವಾಸ್ತವ್ಯ | ಚಾಮರಾಜನಗರ |

**ಸಾಕ್ಷಿಯನ್ನು ದಿನಾಂಕಃ 06-02-2025 ರಂದು ಕರೆಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ ಎಪಿಪಿಯವರಿಂದ,**

ನಾನು ದಿನಾಂಕ 10-11-2019 ರಿಂದ ದಿನಾಂಕ 22-08-2022 ರವರೆಗೆ ಹೊನ್ನಾವರ ಪೋಲೀಸ್ ಠಾಣೆಯ ಕಾನೂನು ಮತ್ತು ಸುವ್ಯವಸ್ಥೆಯ ಉಪವಿಭಾಗದಲ್ಲಿ ಆರಕ್ಷಕ ಉಪನಿರೀಕ್ಷಕನಾಗಿ ಕೆಲಸ ಮಾಡಿರುತ್ತೇನೆ.

ದಿನಾಂಕಃ **09-03-2020** ರಂದು ಸಂಜೆ 04-00 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದ್ದಾಗ ಪಿರ್ಯಾದುದಾರರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಠಾಣಾ ಮೊಕದ್ದಮೆ ಸಂಖ್ಯೆ 67/2020 ರಂತೆ ಪ್ರಕರಣ ದಾಖಲಿಸಿರುತ್ತೇನೆ. ದೂರನ್ನು ಈಗ ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ನಿಪಿ-48 ಎಂದು, ಸಾಕ್ಷಿ ಸಹಿಯನ್ನು ನಿಪಿ-48(ಎ) ಎಂದು ಗುರುತಿಸಲಾಯಿತು.

ನಂತರ ಈ ಪ್ರಕರಣದ ಕಡತವನ್ನು ಚಾಸಾ-26 ರವರಿಗೆ ವಹಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿಗಳ ಪರ ವಕೀಲರಾದ ಶ್ರೀ ವಿ. ಎಂ. ಭಂಡಾರಿಯವರಿಂದಃ**

ಪಿರ್ಯಾದುದಾರರು ದೂರನ್ನು ಬರೆದುಕೊಂಡು ಬಂದಿದ್ದರು. ಪ್ರಕರಣವನ್ನು ದಾಖಲಿಸಿರುತ್ತೇನೆ. ಪಿರ್ಯಾದಿಯನ್ನು ವಿಚಾರಣೆ ಮಾಡಿಲ್ಲ. ಚಾಸಾ-1 ರವರು ನೀಡಿದ ಸುಳ್ಳು ದೂರಿಗೆ ಅನುಗುಣವಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇರುವುದಿಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

ಓ.ಹೇ.ಕೇ. ಸರಿ ಇದೆ.

**ಸಹಿ ಇದೆ**

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**

**ಪ್ರ.ದ.ನ್ಯಾದಂಡಾಧಿಕಾರಿಗಳು, ಹೊನ್ನಾವರ**